सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

1ನೇ ಮಹಡಿ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳದ ಕಟ್ಟಡ (ಹಿಂಭಾಗ), ನಂ. 8, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು-52.

**ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ:41:ಇಯುಬಿ:2020, ಬೆಂಗಳೂರು, ದಿನಾಂಕ: 29.03.2021.**

ರಾಜ್ಯ ಚುನಾವಣಾ ಆಯೋಗವು ಸಂವಿಧಾನದ ಪರಿಚ್ಛೇದ 243 ಜೆಡ್‌ಎ ರಲ್ಲಿ ಪ್ರದತ್ತವಾದ ಅಧಿಕಾರದ ಮೇರೆಗೆ ಹಾಗೂ ಕರ್ನಾಟಕ ಪೌರಸಭೆಗಳ ಅಧಿನಿಯಮ 1964ರ ಪ್ರಕರಣ 19 ರ ಅನ್ವಯ ಹಾಗೂ ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು 1977 ನಿಯಮ 3(1) ರ ಅನ್ವಯ ವಿವಿಧ ಕಾರಣಗಳಿಮದ ತೆರವಾದ ಖಾಲಿ ಸ್ಥಾನಗಳಿಗೆ (ಅನುಬಂಧ-1) ಈ ಕೆಳಗೆ ನಮೂದಿಸಿರುವ ಚುನಾವಣಾ ವೇಳಾಪಟ್ಟಿಯಂತೆ ಸಾರ್ವತ್ರಿಕ ಚುನಾವಣೆಯನ್ನು ನಡೆಸಲು ಆದೇಶಿಸಿದೆ.

| ಕ್ರ. ಸಂ. | ವೇಳಾಪಟ್ಟಿ ವಿವರ | ವೇಳಾಪಟ್ಟಿ |
|---|---|---|
| 1 | ಜಿಲ್ಲಾಧಿಕಾರಿಗಳು ಚುನಾವಣಾ ಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 08.04.2021 ( ಗುರುವಾರ) |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 15.04.2021 (ಗುರುವಾರ) |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 16.04.2021 (ಶುಕ್ರವಾರ) |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 19.04.2021 (ಸೋಮವಾರ) |
| 5 | **ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆಯವರೆಗೆ)** | **27.04.2021 (ಮಂಗಳವಾರ)** |
| 6 | ಮರು ಮತದಾನ ಇದ್ದಲ್ಲಿ ಮತದಾನ ನಡೆಸಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆವರೆಗೆ) | 29.04.2021 (ಗುರುವಾರ) |
| 7 | ಮತಗಳ ಎಣಿಕೆಯ ದಿನಾಂಕ ಮತ್ತು ದಿನ (ಬೆಳಿಗ್ಗೆ 8.00 ಗಂಟೆಯಿಂದ) (ತಾಲ್ಲೂಕಿನ ಕೇಂದ್ರ ಸ್ಥಳದಲ್ಲಿ) | 30.04.2021 (ಶುಕ್ರವಾರ) |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 30.04.2021 (ಶುಕ್ರವಾರ) |

ಪುಟ 2ಕ್ಕೆ...

**ಸದಾಚಾರ ಸಂಹಿತೆಯು ದಿನಾಂಕ: 08.04.2021 ರಿಂದ ದಿನಾಂಕ: 30.04.2021 ರವರೆಗೆ ಸದರಿ ವಾರ್ಡಿನ ವ್ಯಾಪ್ತಿಯಲ್ಲಿ ಜಾರಿಯಲ್ಲಿರುತ್ತದೆ.**

ಜಿಲ್ಲಾಧಿಕಾರಿಗಳು ಆಯೋಗವು ಆದೇಶಿಸಿದ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು, 1977ರ ನಿಯಮ 8ರ ಪ್ರಕಾರ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಯ ವಾರ್ಡಿಗೆ ಸಂಬಂಧಿಸಿದಂತೆ ಚುನಾವಣಾ ಅಧಿಸೂಚನೆಯನ್ನು ಪ್ರಪತ್ರ-1 ರಲ್ಲಿ ಹೊರಡಿಸತಕ್ಕದ್ದು. ಚುನಾವಣಾ ಅಧಿಸೂಚನೆಯ ಅನುಬಂಧದಲ್ಲಿ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಯ ಹೆಸರು, ವಾರ್ಡಿನ ಸಂಖ್ಯೆ, ಮೀಸಲಾತಿ ವಿವರಗಳನ್ನು ಸ್ಪಷ್ಟವಾಗಿ ನಮೂದಿಸುವುದು. ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸತಕ್ಕದ್ದು. ಅಧಿಸೂಚನೆಯ ಪ್ರತಿಗಳನ್ನು ಜಿಲ್ಲಾಧಿಕಾರಿ ಕಛೇರಿ, ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಯ ಕಛೇರಿ ಹಾಗೂ ಇನ್ನಿತರ ಮುಖ್ಯ ಸ್ಥಳಗಳಲ್ಲಿಯೂ ಸಹಾ ಪ್ರದರ್ಶಿಸತಕ್ಕದ್ದು ಹಾಗೂ ಆಯೋಗಕ್ಕೆ ಅಂದೇ ಇ-ಮೇಲ್ ಮೂಲಕ ರಾಜ್ಯ ಚುನಾವಣಾ ಆಯೋಗಕ್ಕೆ ಕಳುಹಿಸುವುದು.

ಅಧಿಸೂಚನೆಯ ಪ್ರತಿಯನ್ನು ಸಂಬಂಧಿಸಿದ ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದೇ ದಿನದಂದು ಪ್ರಪತ್ರ-1ಎ ರಲ್ಲಿ ಚುನಾವಣಾ ನೋಟೀಸನ್ನು ಪ್ರಕಟಿಸುವಂತೆ ಹಾಗೂ ಚುನಾವಣೆ ಪ್ರಕ್ರಿಯೆಯನ್ನು ಪ್ರಾರಂಭಿಸುವಂತೆ ಸೂಚಿಸುವುದು. ಚುನಾವಣಾ ವೇಳಾಪಟ್ಟಿಯನ್ನು ಸಾರ್ವಜನಿಕರ ಮಾಹಿತಿಗಾಗಿ ದಿನಪತ್ರಿಕೆಗಳಲ್ಲಿ ಹಾಗೂ ಸ್ಥಳೀಯ ಪತ್ರಿಕೆಗಳಲ್ಲಿ (ವೆಚ್ಚ ಬಾರದಂತೆ) ಪ್ರಕಟಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು.

**<u>ವಿಶೇಷ ಸೂಚನೆ :-</u>**

1. ಹಾಲಿ ಚಾಲ್ತಿಯಲ್ಲಿರುವ ವಿಧಾನಸಭಾ ಮತದಾರರ ಪಟ್ಟಿಯನ್ನು ಅಳವಡಿಸಿಕೊಂಡು ತಯಾರಿಸಲಾಗುವ ಮತದಾರರ ಪಟ್ಟಿಯಂತೆ ಚುನಾವಣೆ ನಡೆಸುವುದು.
2. ಘೋಷಣಾ ಪತ್ರ / ಪ್ರಮಾಣಪತ್ರ: ಮತದಾರನಿಗೆ ಅಭ್ಯರ್ಥಿಯ ಪೂರ್ವಾಪರಗಳನ್ನು ತಿಳಿದುಕೊಳ್ಳಲು ಸ್ಪರ್ಧಿಸುವ ಪ್ರತಿಯೊಬ್ಬ ಅಭ್ಯರ್ಥಿಯು ನಾಮಪತ್ರದೊಂದಿಗೆ, ತನ್ನ ಹಿನ್ನೆಲೆ, ಚರಾಸ್ತಿ ಮತ್ತು ಸ್ಥಿರಾಸ್ತಿಗಳ ವಿವರಗಳು, ತನ್ನ ಸ್ವವಿವರ, ವಿದ್ಯಾರ್ಹತೆ ಆದಾಯದ ಮೂಲಗಳನ್ನು ಪರಿಷ್ಕೃತ ನಮೂನೆಯಲ್ಲಿ ಘೋಷಣಾ ಪತ್ರ / ಪ್ರಮಾಣ ಪತ್ರ (Affidavit) ಸಲ್ಲಿಸಬೇಕಾಗಿರುತ್ತದೆ.
3. ಸರ್ಕಾರದ ಅಧಿಸೂಚನೆ-II, ಸಂಖ್ಯೆ: ಸಿಆಸುಇ 12 ಹೆಚ್‌ಹೆಚ್‌ಎಲ್ 2020 ದಿನಾಂಕ: 21.11.2020 ರಂತೆ ದಿನಾಂಕ: 10.04.2021 ರಂದು ಎರಡನೇ ಶನಿವಾರವು ನೆಗೋಷಿಯೆಬಲ್ ಇನ್ಸ್ಟ್ರುಮೆಂಟ್ಸ್ ಆಕ್ಟ್ 1881ರ ಪ್ರಕಾರ ಸಾರ್ವತ್ರಿಕ ರಜಾದಿನ ಎಂದು ಅಧಿಸೂಚಿಸಲಾಗಿದ್ದು ಅಂದು ಚುನಾವಣಾಧಿಕಾರಿಗಳು ನಾಮಪತ್ರಗಳನ್ನು ಸ್ವೀಕರಿಸುವಂತಿಲ್ಲ.
4. ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳು ಗಮನಕ್ಕೆ ಬಂದಾಗ ಆಯೋಗದ ಆದೇಶ ಸಂಖ್ಯೆ:ಎಸ್‌ಇಸಿ.10.ಎಂಐಎಸ್‌ಸಿ.2016, ದಿನಾಂಕ: 29.06.2016 ಹಾಗೂ ತಿದ್ದುಪಡಿ ದಿನಾಂಕ: 06.07.2016 ರಂತೆ ಕ್ರಮವಹಿಸುವುದು.
5. ಕಾಲಕಾಲಕ್ಕೆ ಚುನಾವಣೆಗೆ ಸಂಬಂಧಿಸಿದ ವರದಿಯನ್ನು ಆಯೋಗಕ್ಕೆ ಸಲ್ಲಿಸುವುದು.

ಪುಟ 3ಕ್ಕೆ...

6. ಸರ್ಕಾರದ ಅಧಿಸೂಚನೆ ಸಂಖ್ಯೆ ಸಂವ್ಯಶಾಇ 12 ಶಾಸನ 2019, ಬೆಂಗಳೂರು ದಿನಾಂಕ 27.04.2020 ರಂತೆ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964 ರ ಪ್ರಕರಣ 22 ಕ್ಕೆ ತಿದ್ದುಪಡಿ ಮಾಡಲಾಗಿದ್ದು "ಅರ್ಹ ಮತದಾರನು, ಚುನಾವಣೆಯಲ್ಲಿ ಸ್ಪರ್ಧಿಸಿದ ಅಭ್ಯರ್ಥಿಗಳ ಪೈಕಿ ಯಾವೊಬ್ಬ ಅಭ್ಯರ್ಥಿಯ ಪರವಾಗಿ ತನ್ನ ಮತವನ್ನು ಚಲಾಯಿಸಲು ಇಚ್ಚಿಸದಿರುವ ಸಂಧರ್ಭದಲ್ಲಿ ಆತನು "None of the above " (NOTA)
(ಮೇಲಿನ ಯಾರೊಬ್ಬರಿಗೂ ಇಲ್ಲ) ಎಂದು ಮತಚಲಾಯಿಸಲು ಅವಕಾಶ ಕಲ್ಪಿಸಲಾಗಿದೆ.
7. ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ.28.ಇಯುಬಿ.2018, ದಿನಾಂಕ: 01.06.2018 ರಂತೆ ಮತಪತ್ರದಲ್ಲಿ ಎಲ್ಲಾ ಅಭ್ಯರ್ಥಿಗಳ ಹೆಸರಿನ ಮುಂದೆ ಅವರ ಇತ್ತೀಚಿನ ಭಾವಚಿತ್ರ ಮುದ್ರಿಸುವಂತೆ ಕ್ರಮ ಕೈಗೊಳ್ಳುವುದು.

ಚುನಾವಣಾ ಪ್ರಕ್ರಿಯೆ ಜಾರಿಯಲ್ಲಿರುವ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು ಸದಾಚಾರ ಸಂಹಿತೆಯು ಯಾವುದೇ ರೀತಿಯಲ್ಲೂ ಉಲ್ಲಂಘನೆಯಾಗದಂತೆ ನೋಡಿಕೊಳ್ಳತಕ್ಕದ್ದು.

ಆದೇಶಾನುಸಾರ

(ನಾಗರಾಜು. ಎನ್.ಆರ್.)
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.
29/03/2021

**ಇವರಿಗೆ:**
ಸಂಬಂಧಪಟ್ಟ ಜಿಲ್ಲಾಧಿಕಾರಿಯವರಿಗೆ.

# ಅನುಬಂಧ – 1

**ಸಂಖ್ಯೆ: ರಾಚುಆ/41/ಇಯುಬಿ/2021, ದಿನಾಂಕ: 29.03.2020**

| ಕ್ರ. ಸಂ. | ಜಿಲ್ಲೆ | ತಾಲ್ಲೂಕು | ಕ್ರ. ಸಂ. | ನಗರ ಸ್ಥಳೀಯ ಸಂಸ್ಥೆಯ ಹೆಸರು | | ವಾರ್ಡಿನ ಸಂಖ್ಯೆ |
|---|---|---|---|---|---|---|
| 1 | ಹಾವೇರಿ | ಹಿರೇಕೆರೂರ | 1 | ಹಿರೆಕೇರೂರ | ಪಟ್ಟಣ ಪಂಚಾಯತಿ | 01 |
| 2 | ಬೀದರ್ | ಹುಮನಾಬಾದ್ | 2 | ಹಳ್ಳಿಖೇಡ(ಬಿ) | ಪಟ್ಟಣ ಪಂಚಾಯತಿ | 11 |
| | | | | | ಒಟ್ಟು | 02 |

(ನಾಗರಾಜು. ಎನ್. ಆರ್.)
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.
29/03/2021